# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1014 |
| ಮಾನ್ಯ ಸದಸ್ಯರ ಹೆಸರು | ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 22.09.2022 |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರತಿ ಗ್ರಾಮೀಣ ಪ್ರದೇಶಗಳಲ್ಲಿ ಲೈಸನ್ಸ್ ಹೊಂದಿರದೆ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವ ಬಗ್ಗೆ ಮತ್ತು ಕಳ್ಳಬಟ್ಟಿ ಸಾರಾಯಿ ತಯಾರಿಸುವ ಬಗ್ಗೆ ಸಾರ್ವಜನಿಕರಿಂದ ದಾಖಲಾದ ದೂರುಗಳ ಸಂಖ್ಯೆ ಎಷ್ಟು; ದೂರು ದಾಖಲಾದವರ ವಿರುದ್ಧ ಯಾವ ಕ್ರಮ ಕೈಗೊಂಡಿದೆ; ಬಂದಿದ್ದರೆ, ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಗ್ರಾಮೀಣ ಪ್ರದೇಶಗಳಲ್ಲಿ ಕೆಲವು ವ್ಯಕ್ತಿಗಳು ಸ್ವ-ಲಾಭಕ್ಕಾಗಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವ ಬಗ್ಗೆ ಮತ್ತು ಕಳ್ಳಭಟ್ಟಿ ಸಾರಾಯಿ ತಯಾರಿಸುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆ.<br><br>ಕರ್ನಾಟಕ ಉಚ್ಚ ನ್ಯಾಯಾಲಯದ ರಿಟ್ ಪಿಟಿಷನ್ ಸಂಖ್ಯೆ: 13774/2020, ದಿನಾಂಕ:01.12.2020 ರಲ್ಲಿನ ಆದೇಶದಂತೆ ಸಾರ್ವಜನಿಕರಿಂದ ಇಲ್ಲವೇ ಮಹಿಳಾ ಸಂಘಟನೆಗಳಿಂದ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವ ಬಗ್ಗೆ ದೂರುಗಳು ಸ್ವೀಕೃತವಾದಲ್ಲಿ ಯಾವುದೇ ವಿಳಂಬವಿಲ್ಲದೆ ತ್ವರಿತವಾಗಿ ಕಾನೂನಿನಂತೆ ಕ್ರಮ ಕೈಗೊಳ್ಳಲು ಸೂಚಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ದಿನಾಂಕ:01.12.2020 ರಿಂದ 31.03.2022 ರವರೆಗೆ ಒಟ್ಟು 7,975 ದೂರುಗಳು ಸ್ವೀಕೃತವಾಗಿದ್ದು, 7,962 ದೂರಿನ ಬಗ್ಗೆ ಕ್ರಮ ಜರುಗಿಸಿ ವಿಲೇವಾರಿ ಮಾಡಲಾಗಿರುತ್ತದೆ. ಈ ಸಂಬಂಧ ವಿವಿಧ ಕಲಂಗಳಡಿಯಲ್ಲಿ ಒಟ್ಟು 4602 ಮೊಕದ್ದಮೆಗಳನ್ನು ದಾಖಲಿಸಿ 4023 ಆರೋಪಿತರನ್ನು ದಸ್ತಗಿರಿಗೆ ಒಳಪಡಿಸಲಾಗಿರುತ್ತದೆ. 388 ವಾಹನಗಳನ್ನು ಹಾಗೂ ವಿವಿಧ ಪ್ರಕಾರದ 12797 ಲೀಟರ್ ಮದ್ಯ ಹಾಗೂ 2.5 ಕೆ.ಜಿ. ಸಿ.ಹೆಚ್. ಪೌಡರ್ ಅನ್ನು ವಶಪಡಿಸಿಕೊಳ್ಳಲಾಗಿರುತ್ತದೆ. |
| ಆ) | ಮದ್ಯ ಮಾರಾಟವನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು? | ಮದ್ಯ ಮಾರಾಟವನ್ನು ತಡೆಗಟ್ಟುವ ಕುರಿತು ಸರ್ಕಾರದ ಮುಂದೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |

**ಆಇ 91 ಇಎಲ್‌ಕ್ಯೂ 2022**

(ಕೆ. ಗೋಪಾಲಯ್ಯ)
ಅಬಕಾರಿ ಸಚಿವರು.